(ಇಂದು ದಿನಾಂಕ 24.02.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆ:- ವಾದಿ ಪರ ವಕೀಲರಿಂದ:-**

ನನ್ನ ಮುಖ್ಯ ವಿಚಾರಣೆಯನ್ನು ಶಪಥ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿನ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ. ಅದಕ್ಕೆ ನಾನು ಸಹಿ ಮಾಡಿರುತ್ತೇನೆ. ಶಪಥ ಪತ್ರದಲ್ಲಿನ ಅಂಶಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ಪ್ರತಿವಾದಿಗಳು ನನಗೆ ಬರೆದುಕೊಟ್ಟ ಕ್ರಯದ ಕರಾರನ್ನು ಹಾಜರುಪಡಿಸಿದ್ದು ನಿಪಿ 1 ಎಂದು, ದಿನಾಂಕ 21.08.2019 ರಂದು ಪ್ರತಿವಾದಿಗಳಿಗೆ ನೀಡಿದ ನೋಟಿಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ 2 ಎಂದು, ದಿನಾಂಕ 17.09.2019 ರಂದು ಪ್ರತಿವಾದಿಗಳು ನೀಡಿದ ಪ್ರತ್ಯುತ್ತರ ನೋಟಿಸನ್ನು ಹಾಜರುಪಡಿಸಿದ್ದು ನಿಪಿ 3 ಎಂದು, ನಮ್ಮ ಬ್ಯಾಂಕ್ ಖಾತೆಯ ವಿವರಣೆಯನ್ನು ಹಾಜರುಪಡಿಸಿದ್ದು ನಿಪಿ 4 ಎಂದು, 5 ಪಹಣಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 5 ರಿಂದ 9 ಎಂದು ಗುರುತಿಸಲಾಯಿತು.

**(ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ.

2 ನೇ ಅಪರ ಹಿರಿಯ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ,
ಆನೇಕಲ್.